# ಕರ್ನಾಟಕ ಸರ್ಕಾರ
## (ಕಾರಾಗೃಹಗಳ ಇಲಾಖೆ)

**ಕಾರಾಗೃಹಗಳ ಇಲಾಖಾ ನೇಮಕಾತಿ ಸಮಿತಿ, ಬೆಂಗಳೂರು**
**ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಮತ್ತು ಕರ್ನಾಟಕದ ಕಾರಾಗೃಹಗಳ ಮಹಾನಿರೀಕ್ಷಕರ ಕಛೇರಿ, ಶೇಷಾದ್ರಿ ರಸ್ತೆ, ಬೆಂಗಳೂರು –560 009.**

## -: ಅಧಿಸೂಚನೆ :-

**ಸಂಖ್ಯೆ**: ೮೦/ನೇಮಕಾತಿ-2/2018-19,

**ವಿಷಯ**: ಜೈಲರ್ ಮತ್ತು ವಾರ್ಡರ್ ಹುದ್ದೆಗಳ ನೇರ ನೇಮಕಾತಿ ಕುರಿತು.

* * * * * * * *

**(1)**. ಕಾರಾಗೃಹಗಳ ಇಲಾಖೆಯಲ್ಲಿ ಜೈಲರ್ ಮತ್ತು ವಾರ್ಡರ್ ಹುದ್ದೆಗಳ ನೇರ ನೇಮಕಾತಿಗಾಗಿ ಕರ್ನಾಟಕ ಕಾರಾಗೃಹಗಳ ಸೇವೆಗಳು (ನೇಮಕಾತಿ) ನಿಯಮಗಳು 2002 ರ ಮತ್ತು ಅದರ ತಿದ್ದುಪಡಿ ನಿಯಮಗಳು 2007, 2010 ಹಾಗೂ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013, ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು, 2013 ಹಾಗೂ ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಹಾಗೂ ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಅರ್ಹ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳಿಂದ ಆನ್‌ಲೈನ್ (On-line) ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

- ಅರ್ಜಿಗಳನ್ನು ಆನ್‌ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

(2). **ವಿಶೇಷ ಸೂಚನೆಗಳು:-**

2.1) ಹೈದ್ರಬಾದ್-ಕರ್ನಾಟಕ ಮೀಸಲಾತಿ ಹೊಂದಿರುವ ಸ್ಥಳೀಯ ಅಭ್ಯರ್ಥಿಗಳು ಹೈದ್ರಬಾದ್-ಕರ್ನಾಟಕ ಮೀಸಲಾತಿಯಡಿ ಮೀಸಲರಿಸಲಾಗಿರುವ (ಸ್ಥಳೀಯ ವೃಂದದ) ಹುದ್ದೆಗಳಿಗೂ ಹಾಗೂ ಮಿಕ್ಕುಳಿದ (ಉಳಿದ ಮೂಲ ವೃಂದದ) ಹುದ್ದೆಗಳಿಗೂ ಅರ್ಹರಿರುತ್ತಾರೆ.

2.2) ಹೈದ್ರಬಾದ್-ಕರ್ನಾಟಕ ಮೀಸಲಾತಿ ಹೊಂದಿರದ ಅಭ್ಯರ್ಥಿಗಳು ಹೈದ್ರಬಾದ್-ಕರ್ನಾಟಕ ಮೀಸಲಾತಿಯಡಿ ಮೀಸಲರಿಸಲಾಗಿರುವ ಹುದ್ದೆಗಳ ಆಯ್ಕೆಗೆ ಅರ್ಹರಿರುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಮೇಲ್ಕಂಡ ವಿಷಯವನ್ನು ಗಮನದಲ್ಲಿಟ್ಟುಕೊಂಡಿರಬೇಕು.

2.3) ಯಾವುದೇ ಹಂತದಲ್ಲಿಯು ಅಭ್ಯರ್ಥಿಯು ಅರ್ಜಿಯಲ್ಲಿ ಕೋರಿರುವ ಮೀಸಲಾತಿಗಳ ಬದಲಾವಣೆಗೆ ಅವಕಾಶವಿರುವುದಿಲ್ಲ. ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ಅಂಶಗಳು/ಮೀಸಲಾತಿಗಳನ್ನು ಆಧರಿಸಿ ನೇಮಕಾತಿ ಪ್ರಕ್ರಿಯೆಗೆ ಅವಕಾಶ ಕಲ್ಪಿಸಿರುವುದರಿಂದ ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಯಾವುದೇ ಮೀಸಲಾತಿ ಬದಲಾವಣೆ ಕೋರಿ ಸಲ್ಲಿಸುವ ಮನವಿಯನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಯು ಅರ್ಜಿಯಲ್ಲಿ ನೀಡಲಾಗುವ ಮಾಹಿತಿಯನ್ನಾದರಿಸಿ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅನುವು ಮಾಡುವುದರಿಂದ,

downloaded from: www.kpscvaani.com

ಅಭ್ಯರ್ಥಿಯು ನೀಡುವ ಮಾಹಿತಿಯು ಅಂತಿಮ ಎಂದು ಪರಿಗಣಿಸಲಾಗುವುದು ಮತ್ತು ಯಾವುದೇ ಬದಲಾವಣೆಗೆ ಆಸ್ಪದ ನೀಡಲಾಗುವುದಿಲ್ಲ.

(೩). **ಅರ್ಜಿ ಪಡೆಯುವ ಮತ್ತು ಸಲ್ಲಿಸುವ ವಿಧಾನ: ಆನ್‌ಲೈನ್ (Online) ಮುಖಾಂತರ :–**

ಅರ್ಜಿದಾರ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ನೀಡಲಾಗಿರುವ ಮಾಹಿತಿಸೂಚಿ / ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಭರ್ತಿ ಮಾಡಬೇಕು. ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿನ Current Recruitment ನಲ್ಲಿ ನೀಡಲಾಗಿರುವ ಸೂಚನೆಗಳನ್ನು ಓದಿಕೊಂಡು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಆನ್–ಲೈನ್‌ನಲ್ಲಿ ಲಭ್ಯವಿರುವ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅರ್ಜಿದಾರ ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರ, ಸಹಿ ಮತ್ತು ಅಧಿಸೂಚನೆಯ ಕ್ರಮ ಸಂಖ್ಯೆ ೮(ಸಿ)ರಲ್ಲಿ ನಮೂದಿಸಲಾಗಿರುವ ಯಾವುದಾದರು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ (Soft Copy – less than 250 KB) ಸ್ಕ್ಯಾನ್ ಮಾಡಿಟ್ಟುಕೊಂಡಿರಬೇಕು. ನಂತರ ಅರ್ಜಿದಾರನ ಹೆಸರು, ಜಾತಿ, ಪ್ರವರ್ಗ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ, ವಿದ್ಯಾರ್ಹತೆ ಮತ್ತು ಇತ್ಯಾದಿ ವಿವರಗಳನ್ನು ಭರ್ತಿ ಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡಬೇಕು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್ ಮುದ್ರಿಸಬಹುದು. ಚಲನ್ ಮುದ್ರಿಸಲು ಜನರೇಟ್ ಚಲನ್ ಬಟನ್ ಮೇಲೆ ಕ್ಲಿಕ್ ಮಾಡಿದಾಗ ತ್ರಿಪ್ರತಿ (Triplicate) ಬ್ಯಾಂಕ್ ಚಲನ್ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತವೆ. ಆ ಚಲನ್ ಪ್ರತಿಯನ್ನು ಮುದ್ರಿಸಿ / ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಶುಲ್ಕವನ್ನು ನಗದು ರೂಪದಲ್ಲಿ **ಸ್ಥಳೀಯ ಅಂಚೆ ಕಛೇರಿಗಳಲ್ಲಿ ಅಥವಾ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ ನಗದು ರೂಪದಲ್ಲಿ ಅಥವಾ ಆನ್‌ಲೈನ್ ಮೂಲಕ ಪಾವತಿಸಿ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದ್ದು.**

ಅಭ್ಯರ್ಥಿಯು ಶುಲ್ಕ ಪಾವತಿಸಿದ ಎರಡು ದಿನಗಳ ನಂತರ ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in or www.karnatakaprisons.in ನಲ್ಲಿ My Applicationನ್ನು ಕ್ಲಿಕ್ ಮಾಡಿ, ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ ನಂತರ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ, ಸದರಿ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಅರ್ಜಿ ಪ್ರತಿ ಮತ್ತು ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

downloaded from: www.kpscvaani.com

ಪ್ರತಿಯೊಂದು ವೃಂದದ ಹುದ್ದೆಗೂ ಪ್ರತ್ಯೇಕ ಅರ್ಜಿ ಮತ್ತು ಪ್ರತ್ಯೇಕವಾಗಿ ಶುಲ್ಕವನ್ನು ಪಾವತಿಸತಕ್ಕದ್ದು.

| **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭದ ದಿನಾಂಕ** | **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ** | **ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ** |
|---|---|---|
| 21-02-2019 | 09-03.2019 | 11-03-2019 |

**ಟಿಪ್ಪಣಿ: ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ**. ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:11.03.**2019** ರ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ.

**ಸೂಚನೆ:-**

3.1) ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಿ, ನಿಗದಿತ ದಿನಾಂಕದೊಳಗೆ ಸಲ್ಲಿಸಲಾಗುವ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.

3.2) ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ ಸಂಖ್ಯೆ **(Help line)** 080-22262263 ಅನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಎದುರಾದಲ್ಲಿ ಅದನ್ನು ಸ್ಥಗಿತಗೊಳಿಸಿ ಮತ್ತೊಮ್ಮೆ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಲು ತಿಳಿಸಲಾಗಿದೆ.

3.3) **ಶುಲ್ಕ:** ಪ.ಜಾ/ಪ.ಪಂ./ಪ್ರವರ್ಗ-1ರ ಅಭ್ಯರ್ಥಿಗಳಿಗೆ ಮತ್ತು ಸಾಮಾನ್ಯ ವರ್ಗ, ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ, ಬ್ಯಾಂಕ್ / ಅಂಚೆ ಕಛೇರಿ ಶುಲ್ಕವನ್ನು ಒಳಗೊಂಡಂತೆ ಜೈಲರ್ ಮತ್ತು ವಾರ್ಡರ್ ಹುದ್ದೆಗೆ ಪಾವತಿಸಬೇಕಾದ ಶುಲ್ಕದ ವಿವರ ಈ ಕೆಳಕಂಡಂತೆ ಇರುತ್ತದೆ.

**ಜೈಲರ್ ಮತ್ತು ವಾರ್ಡರ್ ಹುದ್ದೆಗೆ**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | **`.250/-** |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | **`.100/-** |

ಒಮ್ಮೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಮೇಲಿನ ಕಾಲಂಗಳಲ್ಲಿ ನಮೂದಿಸಿದಂತೆ ಅಭ್ಯರ್ಥಿಗೆ ಅನ್ವಯಿಸುವ ಶುಲ್ಕ ಮಾತ್ರ ಪಾವತಿಸತಕ್ಕದ್ದು.

**(4). ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉದ್ದೇಶಿಸಿರುವ ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆಯು ತಾತ್ಕಾಲಿಕವಾಗಿದ್ದು ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಮುನ್ಸೂಚನೆಯಿಲ್ಲದೆ ಬದಲಾವಣೆಗೊಳಪಟ್ಟಿರುತ್ತದೆ** :-

| **ಕ್ರ. ಸಂ.** | **ಹುದ್ದೆಯ ಹೆಸರು** | **ವೇತನ ಶ್ರೇಣಿ** | **ಖಾಲಿ ಹುದ್ದೆಗಳ ಸಂಖ್ಯೆ** |
|---|---|---|---|
| 1 | ಜೈಲರ್ | 33450-850-36000-950-39800-1100-46400-1250-53900-1450-62600 | **12** |
| 2 | ವಾರ್ಡರ್ | 21400-500-22400-550-24600-600-27000-650-29600-750-32600-850-36000-950-39800-1100-42000 | **650** |

downloaded from: www.kpscvaani.com

(೫). **ಜೈಲರ್ ಹಾಗೂ ವಾರ್ಡರ್ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ** :-

**(ಎ) ಜೈಲರ್ 11 ಸಂಖ್ಯೆ (ಉಳಿದ ಮೂಲ ವೃಂದ)**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ ವ್ಯಾಸಂಗ ಮಾಡಿದ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಇತರರು |
|---|---|---|---|---|---|---|---|
| ಸಾಮಾನ್ಯ ವರ್ಗ | 5 | 2 | 1 | 1 | – | 1 | – |
| ಪರಿಶಿಷ್ಟ ಜಾತಿ | 2 | – | – | 1 | – | – | 1 |
| ಪರಿಶಿಷ್ಟ ಪಂಗಡ | – | – | – | – | – | – | – |
| ಪ್ರವರ್ಗ– 1 | – | – | – | – | – | – | – |
| ಪ್ರವರ್ಗ– 2ಎ | 2 | – | – | 1 | – | – | 1 |
| ಪ್ರವರ್ಗ– 2ಬಿ | 1 | – | – | – | – | 1 | – |
| ಪ್ರವರ್ಗ– 3ಎ | – | – | – | – | – | – | – |
| ಪ್ರವರ್ಗ– 3ಬಿ | 1 | – | – | – | – | 1 | – |
| **ಒಟ್ಟು** | **11** | **2** | **1** | **3** | **–** | **3** | **2** |

**(ಬಿ) ಜೈಲರ್ 1 ಸಂಖ್ಯೆ (ಹೈದ್ರಬಾದ್–ಕರ್ನಾಟಕ ಪ್ರದೇಶದ ಸ್ಥಳೀಯ ವೃಂದ)**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ ವ್ಯಾಸಂಗ ಮಾಡಿದ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಇತರರು |
|---|---|---|---|---|---|---|---|
| ಸಾಮಾನ್ಯ ವರ್ಗ | – | – | – | – | – | – | – |
| ಪರಿಶಿಷ್ಟ ಜಾತಿ | 1 | 1 | – | – | – | – | – |
| ಪರಿಶಿಷ್ಟ ಪಂಗಡ | – | – | – | – | – | – | – |
| ಪ್ರವರ್ಗ– 1 | – | – | – | – | – | – | – |
| ಪ್ರವರ್ಗ– 2ಎ | – | – | – | – | – | – | – |
| ಪ್ರವರ್ಗ– 2ಬಿ | – | – | – | – | – | – | – |
| ಪ್ರವರ್ಗ– 3ಎ | – | – | – | – | – | – | – |
| ಪ್ರವರ್ಗ– 3ಬಿ | – | – | – | – | – | – | – |
| **ಒಟ್ಟು** | **1** | **1** | **–** | **–** | **–** | **–** | **–** |

**(ಸಿ) ವಾರ್ಡರ್ 574 ಸಂಖ್ಯೆ (ಉಳಿದ ಮೂಲ ವೃಂದ)**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ ವ್ಯಾಸಂಗ ಮಾಡಿದ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಇತರರು |
|---|---|---|---|---|---|---|---|
| ಸಾಮಾನ್ಯ ವರ್ಗ | 287 | 93 | 15 | 29 | 14 | 72 | 64 |
| ಪರಿಶಿಷ್ಟ ಜಾತಿ | 86 | 28 | 04 | 09 | 04 | 21 | 20 |
| ಪರಿಶಿಷ್ಟ ಪಂಗಡ | 17 | 05 | 01 | 01 | 01 | 05 | 04 |
| ಪ್ರವರ್ಗ– 1 | 23 | 07 | 01 | 02 | 02 | 05 | 06 |
| ಪ್ರವರ್ಗ– 2ಎ | 86 | 28 | 04 | 09 | 04 | 21 | 20 |
| ಪ್ರವರ್ಗ– 2ಬಿ | 26 | 07 | 01 | 03 | 01 | 07 | 07 |
| ಪ್ರವರ್ಗ– 3ಎ | 23 | 07 | 01 | 02 | 01 | 06 | 06 |
| ಪ್ರವರ್ಗ– 3ಬಿ | 26 | 09 | 02 | 02 | 02 | 04 | 07 |
| **ಒಟ್ಟು** | **574** | **184** | **29** | **57** | **29** | **141** | **134** |

downloaded from: www.kpscvaani.com

**(ಡಿ) ವಾರ್ಡರ್ 76 ಸಂಖ್ಯೆ (ಹೈದ್ರಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವೃಂದ)**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಮಹಿಳಾ ಅಭ್ಯರ್ಥಿ | ಕನ್ನಡ ಮಾಧ್ಯಮ ವ್ಯಾಸಂಗ ಮಾಡಿದ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಇತರರು |
|---|---|---|---|---|---|---|---|
| ಸಾಮಾನ್ಯ ವರ್ಗ | 40 | 12 | 2 | 4 | 2 | 10 | 10 |
| ಪರಿಶಿಷ್ಟ ಜಾತಿ | 12 | 3 | 1 | 2 | 1 | 2 | 3 |
| ಪರಿಶಿಷ್ಟ ಪಂಗಡ | 3 | 1 | - | - | - | 1 | 1 |
| ಪ್ರವರ್ಗ- 1 | 4 | 1 | 1 | - | 1 | 1 | - |
| ಪ್ರವರ್ಗ- 2ಎ | 11 | 3 | 1 | 2 | 1 | 2 | 2 |
| ಪ್ರವರ್ಗ- 2ಬಿ | - | - | - | - | - | - | - |
| ಪ್ರವರ್ಗ- 3ಎ | 3 | 1 | 1 | - | - | 1 | - |
| ಪ್ರವರ್ಗ- 3ಬಿ | 3 | 1 | - | 1 | - | - | 1 |
| **ಒಟ್ಟು** | **76** | **22** | **6** | **9** | **5** | **17** | **17** |

**ಟಿಪ್ಪಣಿ**: ಕನ್ನಡ ಮಾಧ್ಯಮ, ಮಾಜಿ ಸೈನಿಕರು, ಯೋಜನೆಗಳಿಂದ ನಿರಾಶ್ರಿತಗೊಂಡ, ಗ್ರಾಮೀಣ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಈ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿದ ಪ್ರವರ್ಗದ ಇತರೆ ಅಭ್ಯರ್ಥಿಗಳಿಂದ ತುಂಬಲಾಗುವುದು ಹಾಗೂ ಮಹಿಳಾ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಆ ಖಾಲಿ ಹುದ್ದೆಗಳನ್ನು ಆಯಾ ವರ್ಗಕ್ಕೆ ಸೇರಿದ ಪುರುಷ ಅಭ್ಯರ್ಥಿಗಳಿಂದ ಅರ್ಹತಾನುಸಾರ ತುಂಬಲಾಗುವುದು.

(6). **ಅರ್ಹತಾ ಷರತ್ತುಗಳು** :-

6.1) ಭಾರತೀಯ ನಾಗರೀಕನಾಗಿರತಕ್ಕದ್ದು.

6.2) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

6.3) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(7). **ವಯೋಮಿತಿ (ಜೈಲರ್ ಹಾಗೂ ವಾರ್ಡರ್ ಹುದ್ದೆಗೆ)** :-

7.1) **ಸಾಮಾನ್ಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ:**

ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ **09.03.2019ಕ್ಕೆ** ಅಭ್ಯರ್ಥಿಗೆ ಕನಿಷ್ಟ **20** ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 28 ವರ್ಷಗಳು.

ಆ) ಇತರೆ ಅಭ್ಯರ್ಥಿಗಳಿಗೆ 26 ವರ್ಷಗಳು.

downloaded from: www.kpscvaani.com

**7.2) ಮಾಜಿ ಸೈನಿಕ ಅಭ್ಯರ್ಥಿಗಳಿಗೆ :**
ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿಯ ಜೊತೆಗೆ ಹೆಚ್ಚುವರಿ ೦೩ ವರ್ಷಗಳು" ಸಡಲಿಕೆ ಮಾಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

**7.3) ಮಾಜಿ ಸೈನಿಕರ ಬಗ್ಗೆ ವಿವರಣೆ:**
ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್ (Defence Security Corps), ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್ (General Reserved Engineering Force), ಲೋಕ್ ಸಹಾಯಕ್ ಸೇನಾ (Lok Sahayak Sena) ಮತ್ತು ಪ್ಯಾರಾ ಮಿಲಿಟರಿದಳ (Para Military Forces) ದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು

(ಅ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು.

**ಅಥವಾ**

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

**ಅಥವಾ**

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.
4. ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮ ೯(1) ರನ್ವಯ ಕೇಂದ್ರ ಸಶಸ್ತ್ರ ಸೇನೆಯಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರ ಸೇನೆಯ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

downloaded from: www.kpscvaani.com

**ಟಿಪ್ಪಣಿ:** ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೇ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ.

(ಉ) ಈ ಆಯ್ಕೆ ನೇಮಕಾತಿಯು ಕರ್ನಾಟಕ ಕಾರಾಗೃಹಗಳ ಸೇವೆಗಳು (ನೇಮಕಾತಿ) ನಿಯಮಗಳು 2002, ಮತ್ತು ಅದರ ತಿದ್ದುಪಡಿ ನಿಯಮ – 2007, 2010 ಹಾಗೂ ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಹಾಗೂ ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ ಆದೇಶಗಳ ಅನುಸಾರ ಮತ್ತು ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಮೇರೆಗೆ ಆಯಾ ಹುದ್ದೆಗೆ ಅನುಗುಣವಾಗಿ ಅನುಸರಿಸಲಾಗುವುದು.

**(8) ವಿದ್ಯಾರ್ಹತೆ :–**

**(ಅ). ಜೈಲರ್ ಹುದ್ದೆ:** ಈ ಹುದ್ದೆಗೆ ಕನಿಷ್ಟ ಯಾವುದಾದರೂ ಒಂದು ಬ್ಯಾಚುಲರ್ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು. ಸೋಶಿಯಾಲಜಿ ಅಥವಾ ಸೈಕಾಲಜಿ ಅಥವಾ ಕ್ರಿಮಿನಾಲಜಿ ಅಥವಾ ಕರೆಕ್ಷನಲ್ ಅಡ್ಮಿನಿಸ್ಟ್ರೇಷನ್‌ನಲ್ಲಿ ಅಥವಾ ತತ್ಸಮಾನ ವಿಷಯದಲ್ಲಿ ಬ್ಯಾಚುಲರ್ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು.

**(ಆ). ವಾರ್ಡರ್ ಹುದ್ದೆ:** ಈ ಹುದ್ದೆಗೆ ಎಸ್.ಎಸ್.ಎಲ್.ಸಿ./10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

ಈ ಮೇಲ್ಕಂಡ ಜೈಲರ್ ಹಾಗೂ ವಾರ್ಡರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 09.03.2019ಕ್ಕೆ ಅಭ್ಯರ್ಥಿಯು ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಹಾಗೂ ವಿದ್ಯಾರ್ಹತೆ ಪ್ರಮಾಣ ಪತ್ರಗಳನ್ನು ಹೊಂದಿರಬೇಕು.

**(9) ಲಿಖಿತ ಪರೀಕ್ಷೆ :–**

1) **ಜೈಲರ್ ಹುದ್ದೆಗೆ** ಸಂಬಂಧಿಸಿದಂತೆ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ 100 ಅಂಕಗಳಿಗೆ ವಸ್ತುನಿಷ್ಠ (ಆಬ್ಜೆಕ್ಟಿವ್) ಮಾದರಿಯ ಬಹುವಿಧ ಆಯ್ಕೆಯ ಪ್ರಶ್ನೆಗಳಿದ್ದು, ಇವು ಸಾಮಾನ್ಯ ಜ್ಞಾನ, ವಿಜ್ಞಾನ, ಭೂಗೋಳ, ಇತಿಹಾಸ, ಸಂವಿಧಾನ, ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿ ಇತ್ಯಾದಿ ವಿಷಯಗಳಲ್ಲಿನ ಲಿಖಿತ ಪರೀಕ್ಷೆಯಾಗಿರುತ್ತದೆ. ಈ ಪರೀಕ್ಷೆಯ ಅವಧಿ ಒಂದೂವರೆ ಗಂಟೆಯದ್ದಾಗಿರುತ್ತದೆ.

2) **ವಾರ್ಡರ್ ಹುದ್ದೆಗೆ** ಸಂಬಂಧಿಸಿದಂತೆ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ 100 ಅಂಕಗಳಿಗೆ ವಸ್ತುನಿಷ್ಠ (ಆಬ್ಜೆಕ್ಟಿವ್) ಮಾದರಿಯ ಬಹುವಿಧ ಆಯ್ಕೆಯ ಪ್ರಶ್ನೆಗಳಿದ್ದು, ಇವು ಸಾಮಾನ್ಯ ಜ್ಞಾನ, ವಿಜ್ಞಾನ, ಭೂಗೋಳ, ಇತಿಹಾಸ, ಸಂವಿಧಾನ, ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿ ಇತ್ಯಾದಿ ವಿಷಯಗಳಲ್ಲಿನ ಲಿಖಿತ ಪರೀಕ್ಷೆಯಾಗಿರುತ್ತದೆ. ಈ ಪರೀಕ್ಷೆಯ ಅವಧಿ ಒಂದೂವರೆ ಗಂಟೆಯದ್ದಾಗಿರುತ್ತದೆ.

3) ಜೈಲರ್ ಮತ್ತು ವಾರ್ಡರ್ ಹುದ್ದೆಗೆ ಲಿಖಿತ ಪರೀಕ್ಷೆಗಳನ್ನು ಮುಂದೆ ಪ್ರಕಟಿಸುವ ದಿನಾಂಕಗಳಲ್ಲಿ ಆಯ್ಕೆ ಸಮಿತಿಯು ನಿಗದಿಪಡಿಸುವ ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುವುದು. ಆಯ್ಕೆ ಸಮಿತಿಯು ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ.

4) ಅಭ್ಯರ್ಥಿಗಳು ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಹೊಂದಿರುವ ಕರೆ ಪತ್ರವನ್ನು ಈ ಕಚೇರಿಯ ಅಧಿಕೃತ ವೆಬ್‌ಸೈಟ್ www.karnatakaprisons.in ನಿಂದ ಡೌನ್‌ಲೋಡ್ ಮಾಡಿಕೊಳ್ಳುವುದು.

downloaded from: www.kpscvaani.com

**5) ಲಿಖಿತ ಪರೀಕ್ಷೆಗೆ ಹಾಜರಾಗುವಾಗ ಅಭ್ಯರ್ಥಿಗಳು i) ಕರೆಪತ್ರ ii) ಆನ್‌ಲೈನ್ ಅರ್ಜಿಯ ಹಾರ್ಡ್‌ಕಾಪಿ ಹಾಗೂ iii) ಹಣ ಪಾವತಿಸಿದ ಬಗ್ಗೆ ಬ್ಯಾಂಕ್ / ಅಂಚೆ ಕಛೇರಿಯ ಚಲನ್‌ಗಳನ್ನು ತರತಕ್ಕದ್ದು. ತಪ್ಪಿದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.**

**6)** ಲಿಖಿತ ಪರೀಕ್ಷೆಯ ಕರೆಪತ್ರವನ್ನು ಅಭ್ಯರ್ಥಿಗಳು ಈ ಇಲಾಖೆಯ ಅಧಿಕೃತ ವೆಬ್‌ಸೈಟ್ www.karnatakaprisons.in ನಿಂದ ಡೌನ್‌ಲೋಡ್ ಮಾಡಿಕೊಳ್ಳುವುದು. ಈ ಸಂಬಂಧ ಪರೀಕ್ಷೆಯ ದಿನಾಂಕ, ವೇಳೆ ಮತ್ತು ಸ್ಥಳಗಳನ್ನು ನಿಗದಿಪಡಿಸಿದ ತರುವಾಯ ಕರೆಪತ್ರಗಳನ್ನು ವೆಬ್‌ಸೈಟ್‌ನಲ್ಲಿ ಬಿಡುಗಡೆ ಮಾಡಲಾಗುವುದು ಮತ್ತು ಈ ಬಗ್ಗೆ ಮಾಧ್ಯಮಗಳ ಮೂಲಕ ಮತ್ತು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಲಿಖಿತ ಪರೀಕ್ಷೆಯು ನಡೆಯುವ ದಿನಾಂಕ, ವೇಳೆ ಮತ್ತು ಸ್ಥಳವನ್ನು ಮುಂದೆ ಸಂಬಂಧಪಟ್ಟ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.karnatakaprisons.in ನ್ನು ದಿನನಿತ್ಯ ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

1) ಪಾಸ್‌ಪೋರ್ಟ್ (Passport)
2) ಚಾಲನಾ ಪರವಾನಗಿ ಪತ್ರ (Driving License)
3) ಪ್ಯಾನ್ ಕಾರ್ಡ್ (PAN Card)
4) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ/ ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
5) ಸಾರ್ವಜನಿಕ ಬ್ಯಾಂಕುಗಳು/ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
6) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
7) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)
8) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ/ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
9) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
10) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).
11) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್. (AADHAR CARD).
12) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧಗಂಟೆ ಮುಂಚಿತವಾಗಿ ಪರೀಕ್ಷಾ ಕೇಂದ್ರದಲ್ಲಿ ಹಾಜರಿರತಕ್ಕದ್ದು.
13) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನ್‌ಗಳು, ಪೇಜರ್, ಕ್ಯಾಲ್ಕ್ಯುಲೇಟರ್ ಇತ್ಯಾದಿ ಎಲೆಕ್ಟ್ರಾನಿಕ್ ಉಪಕರಣಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಬರುವುದನ್ನು ನಿಷೇಧಿಸಿದೆ.

downloaded from: www.kpscvaani.com

**ಸೂಚನೆ:-**

i) ಅ) ಅಭ್ಯರ್ಥಿಗಳಿಗೆ ನೀಡಲಾಗುವ ಪ್ರಶ್ನೆ ಪತ್ರಿಕೆಯನ್ನು ಇಂಗ್ಲೀಷ್ ಮತ್ತು ಕನ್ನಡದಲ್ಲಿ ಮುದ್ರಿಸಲಾಗಿರುತ್ತದೆ.

ಆ) ಪ್ರಶ್ನೆ ಪತ್ರಿಕೆಯು ವಸ್ತುನಿಷ್ಟ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಅಭ್ಯರ್ಥಿಯು ಸರಿಯಾದ ಉತ್ತರವನ್ನು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಗುರುತಿಸಬೇಕು.

ಇ) ಪ್ರಶ್ನೆ ಪತ್ರಿಕೆಯಲ್ಲಿನ ಪ್ರಶ್ನೆಗಳಿಗೆ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ ಕಪ್ಪು/ನೀಲಿ ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ಅಭ್ಯರ್ಥಿಯು ನಿಗದಿತ ಜಾಗದಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ) ಹಾಗೂ ಅರ್ಜಿ ಸಂಖ್ಯೆ ರೋಲ್ ನಂಬರ್ ಮತ್ತು ಸಹಿಯನ್ನು ತಪ್ಪದೇ ಭರ್ತಿ ಮಾಡಬೇಕು. ಇದನ್ನು ತುಂಬದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ.

ಈ) ಅಭ್ಯರ್ಥಿಗಳು ಅರ್ಜಿ ಸಂಖ್ಯೆ. ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು.

ಉ) ಅರ್ಜಿ ಸಂಖ್ಯೆ, ರೋಲ್ ನಂಬರ್ ಇತ್ಯಾದಿಗಳನ್ನು ಭರ್ತಿ ಮಾಡದೇ ಪರೀಕ್ಷೆ ಮುಗಿದ ನಂತರ ಅದನ್ನು ಪರಿಗಣಿಸುವಂತೆ ಕೋರಿದಲ್ಲಿ, ಅಂತಹ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

ii) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

iii) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು ಮತ್ತು ಅವರ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

iv) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಮೊಬೈಲ್ ಫೋನುಗಳನ್ನು ಅಭ್ಯರ್ಥಿಗಳು ಹೊಂದಿದ್ದರೆ ಅವರನ್ನು ಅನರ್ಹಗೊಳಸಲಾಗುತ್ತದೆ.

v) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಪೇಜರ್, ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ.

vi) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ. ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಪರೀಕ್ಷಾ ಮೇಲ್ವಿಚಾರಕರ ಮುಖಾಂತರ ಅಭ್ಯರ್ಥಿಯ ಹೆಸರು, ವಿಳಾಸ, ನೋಂದಣಿ ಸಂಖ್ಯೆ. ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ಪರೀಕ್ಷಾ ಮೇಲ್ವಿಚಾರಕರಿಗೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. ಪ್ರಶ್ನೆ ಪತ್ರಿಕೆಯಲ್ಲಿ ಯಾವುದೇ ದೋಷ ಕಂಡುಬಂದಲ್ಲಿ ಅದನ್ನು ತಕ್ಷಣ ಮೇಲ್ವಿಚಾರಕರ ಗಮನಕ್ಕೆ ತಂದು ಅದನ್ನು ಸರಿಪಡಿಸಿಕೊಳ್ಳಬೇಕು. ಪರೀಕ್ಷೆ ಮುಗಿದ ನಂತರ ಅದರ ಬಗ್ಗೆ ನೇಮಕಾತಿ ಸಮಿತಿಯ ಗಮನಕ್ಕೆ ತಂದರೆ ಅಂತಹ ಆಕ್ಷೇಪಣೆಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

(10) ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಮತ್ತು ಅವರು ಅರ್ಹತಾ (qualifying) ಪರೀಕ್ಷೆಯಲ್ಲಿ ಪಡೆದ ಶೇಕಡಾವಾರು ಅಂಕಗಳನ್ನೂ ಕೂಡಿ ಅದರ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು / ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹ

downloaded from: www.kpscvaani.com

ಅಭ್ಯರ್ಥಿಗಳ ಪಟ್ಟಿಯಿಂದ / ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ **1:5 ರ** ಪ್ರಮಾಣದಲ್ಲಿ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಅಭ್ಯರ್ಥಿಗಳನ್ನು ಕರೆಯಲಾಗುವುದು.

**(11) ದೇಹದಾರ್ಢ್ಯತೆ :–**

ಜೈಲರ್ ಮತ್ತು ವಾರ್ಡರ್ ಹುದ್ದೆಗೆ ಸಂಬಂಧಿಸಿದಂತೆ ಈ ಕೆಳಗಿನ ದೇಹದಾರ್ಢ್ಯತೆ ಹೊಂದಿದವರು ಮಾತ್ರ ಅರ್ಜಿ ಸಲ್ಲಿಸಬೇಕು. ಅಲ್ಲದೆ ಅಭ್ಯರ್ಥಿಗಳು ಸದರಿ ಪರೀಕ್ಷೆಗೆ ಬರುವಾಗ, ಕರೆಪತ್ರವನ್ನು ಇಲಾಖೆಯ ವೆಬ್ ಸೈಟ್‌ನಿಂದ ಡೌನ್‌ಲೋಡ್ ಮಾಡಿ ಅದರ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

1. ಪಾಸ್‌ಪೋರ್ಟ್ (Passport)
2. ಚಾಲನಾ ಪರವಾನಗಿ ಪತ್ರ (Driving License)
3. ಪ್ಯಾನ್ ಕಾರ್ಡ್ (PAN Card)
4. ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ/ ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
5. ಸಾರ್ವಜನಿಕ ಬ್ಯಾಂಕುಗಳು/ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
6. ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
7. ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)
8. ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ/ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
9. ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
10. ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).
11. ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್. (AADHAR CARD).

**ದೇಹದಾರ್ಢ್ಯತೆ ಪರೀಕ್ಷೆ:–**

| ಅಳತೆ | ಪುರುಷ ಅಭ್ಯರ್ಥಿಗಳಿಗೆ | ಮಹಿಳಾ ಅಭ್ಯರ್ಥಿಗಳಿಗೆ |
|---|---|---|
| ಎತ್ತರ | 168 ಸೆಂ.ಮೀ., | 157 ಸೆಂ.ಮೀ., |
| ಎದೆ ಸುತ್ತಳತೆ | ಪೂರ್ಣ ಉಸಿರೆಳೆದಾಗ ಎದೆಯ ಸುತ್ತಳತೆ ಕನಿಷ್ಟ 86 ಸೆ.ಮೀ. ಗಳಷ್ಟಿದ್ದು ಕನಿಷ್ಟ 5 ಸೆ.ಮೀ. ಗಳಷ್ಟು ವಿಸ್ತರಣೆ ಹೊಂದಿರಬೇಕು. | ಅನ್ವಯಿಸುವುದಿಲ್ಲ |
| ತೂಕ | ಅನ್ವಯಿಸುವುದಿಲ್ಲ. | 46 ಕೆ.ಜಿ. |
| ದೃಷ್ಟಿ | **ಉತ್ತಮ** / **ಕನಿಷ್ಟ**<br>1. ದೂರದೃಷ್ಟಿ: 6/9 ಅಥವಾ 6/9 / 6/9 6/12<br>2. ಸಮೀಪ ದೃಷ್ಟಿ: 0/6 / 0/8<br>ಪ್ರತಿ ಕಣ್ಣು ಸಂಪೂರ್ಣ ಕ್ಷೇತ್ರ ದೃಷ್ಟಿ ಹೊಂದಿರಲೇಬೇಕು. ವರ್ಣಾಂಧತೆ, ಮೆಳ್ಳಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆ ಎಂದು ಪರಿಗಣಿಸಲಾಗುವುದು. | |
| ಶ್ರವಣ ಶಕ್ತಿ | (1) ರಿನ್ನೇಸ್ ಪರೀಕ್ಷೆ (2) ವೆಬ್ಬರ್ಸ್ ಪರೀಕ್ಷೆ (3) ವೆರ್ಟಿಗೋ ಪರೀಕ್ಷೆ .<br>ಮೇಲಿನ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಕಂಡುಬಂದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು. | |

downloaded from: www.kpscvaani.com

**ಕೆಳಕಂಡವುಗಳು ದೈಹಿಕ ಅನರ್ಹತೆಗಳಾಗಿರುತ್ತವೆ:**

- ತಾಗುಮಂಡಿ (Knock-Knees)
- ಬಾಗಿದ ಕಾಲುಗಳು (Bow legs)
- ಚಪ್ಪಟೆ ಪಾದ (flat feet)
- ಅಪಧಮನಿ ಊತ (Varicose veins)
- ಮಾತಿನಲ್ಲಿ ಅಡಚಣೆ (ಗುಕ್ಕಿಸುವುದು) (Speech impediment).

**(12) ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಈ ಕೆಳಕಂಡಂತೆ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು.**

**(ಎ) ದೈಹಿಕ ಸಾಮರ್ಥ್ಯ ಪರೀಕ್ಷೆ :–**

**ಪುರುಷ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ**

| **ಅಂಶಗಳು** | **ಅರ್ಹತಾ ವೇಳೆ / ದೂರ** |
|---|---|
| 100 ಮೀಟರ್ ಓಟ | 15 ಸೆಕೆಂಡುಗಳು |
| ಎತ್ತರ ಜಿಗಿತ (High jump) | 1.20 ಮೀಟರ್ |
| ಉದ್ದ ಜಿಗಿತ (Long jump) | 3.80 ಮೀಟರ್ |
| ಗುಂಡೆಸೆತ (7.26 ಕಿಲೋ) (Shot put) | 5.60 ಮೀಟರ್ |
| 800 ಮೀಟರ್ ಓಟ | 2 ನಿಮಿಷ 50 ಸೆಕೆಂಡುಗಳು |

**ಮಹಿಳಾ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ**

| **ಅಂಶಗಳು** | **ಅರ್ಹತಾ ವೇಳೆ / ದೂರ** |
|---|---|
| 100 ಮೀಟರ್ ಓಟ | 18.5 ಸೆಕೆಂಡುಗಳು |
| ಎತ್ತರ ಜಿಗಿತ (High jump) | 0.90 ಮೀಟರ್ |
| ಉದ್ದ ಜಿಗಿತ (Long jump) | 2.50 ಮೀಟರ್ |
| ಗುಂಡೆಸೆತ (3.63 ಕಿಲೋ) (Shot put) | 3.75 ಮೀಟರ್ |
| 200 ಮೀಟರ್ ಓಟ | 40 ಸೆಕೆಂಡುಗಳು |

ಅಭ್ಯರ್ಥಿಗಳು ಮೇಲಿನ **5** ದೈಹಿಕ ಸಾಮರ್ಥ್ಯ ಪರೀಕ್ಷೆಗಳ ಪೈಕಿ, ಕನಿಷ್ಠ **3** ರಲ್ಲಿ ಉತ್ತೀರ್ಣರಾಗಬೇಕು. ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

**ಟಿಪ್ಪಣಿ :** **ದೈಹಿಕ ಸಾಮರ್ಥ್ಯ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯನ್ನು ಒಂದು ಸಮಿತಿಯು ನಡೆಸುವುದು. ಅಭ್ಯರ್ಥಿಗಳು ಸದರಿ ಪರೀಕ್ಷೆಯಲ್ಲಿ ಉತ್ತೀರ್ಣ / ಅನುತ್ತೀರ್ಣದ ತೀರ್ಮಾನವು ಸಮಿತಿಯ ಅಂತಿಮ ನಿರ್ಧಾರಕ್ಕೆ ಒಳಪಟ್ಟಿರುತ್ತದೆ. ಅರ್ಹತೆಯನ್ನು ಯಾವುದೇ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ. ದೈಹಿಕ ಸಾಮರ್ಥ್ಯ, ದೇಹದಾರ್ಢ್ಯತೆ ಹಾಗೂ ದೈಹಿಕ ಅರ್ಹತೆ ಪರೀಕ್ಷೆ ಪೂರ್ಣಗೊಂಡ ನಂತರ ಸಂಬಂಧಪಟ್ಟ ದಾಖಲೆಗೆ ಅಭ್ಯರ್ಥಿಗಳು ತಮ್ಮ ಸಹಿ ಹಾಕಬೇಕು.**

downloaded from: www.kpscvaani.com

**(13) ಮೌಖಿಕ ಪರೀಕ್ಷೆ (ಜೈಲರ್ ಹುದ್ದೆಗೆ)** : ದೈಹಿಕ ಸಾಮರ್ಥ್ಯ, ದೇಹದಾರ್ಢ್ಯತೆ ಹಾಗೂ ದೈಹಿಕ ಅರ್ಹತೆ ಪರೀಕ್ಷೆಯಲ್ಲಿ ತೇರ್ಗಡೆಯಾದ ಜೈಲರ್ ಹುದ್ದೆಯ ಅಭ್ಯರ್ಥಿಗಳಿಗೆ **1:3** ಪ್ರಮಾಣದಲ್ಲಿ **5** ಅಂಕಗಳ ಮೌಖಿಕ ಸಂದರ್ಶನ ನಡೆಸಲಾಗುವುದು. ಸಂದರ್ಶನಕ್ಕೆ ಅರ್ಹರಾಗುವ ಅಭ್ಯರ್ಥಿಗಳಿಗೆ ಇಲಾಖೆಯ ವೆಬ್-ಸೈಟ್‌ನಲ್ಲಿ ಕರೆ ಪತ್ರವನ್ನು ಅಪ್‌ಲೋಡ್ ಮಾಡಲಾಗುವುದು, ಅದನ್ನು ಅಭ್ಯರ್ಥಿಗಳು ಡೌನ್‌ಲೋಡ್ ಮಾಡಿಕೊಂಡು ಲಿಖಿತ ಪರೀಕ್ಷೆಗೆ ಅಥಾವ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ತೆಗೆದುಕೊಂಡು ಹೋಗಲಾಗಿರುವ ಗುರುತಿನ ಚೀಟಿಯೊಂದಿಗೆ ನೇಮಕಾತಿ ಸಮಿತಿಯ ಮುಂದೆ ಸಂದರ್ಶನಕ್ಕೆ ಹಾಜರಾಗಬೇಕಾಗುವುದು. ಈ ಮೌಖಿಕ ಪರೀಕ್ಷೆಯಲ್ಲಿ ಕನಿಷ್ಠ ಅಂಕಗಳು ಇರುವುದಿಲ್ಲ. ಅಭ್ಯರ್ಥಿಗಳು ಮೌಖಿಕ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಒಳಗೊಂಡ ಕರೆ ಪತ್ರಗಳನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.karnatakaprisons.in ನಿಂದ ಪಡೆದುಕೊಳ್ಳಬೇಕು. ಅಭ್ಯರ್ಥಿಗಳು ಎಲ್ಲಾ ಮೂಲ ದಾಖಲಾತಿಗಳನ್ನು ಮೌಖಿಕ ಪರೀಕ್ಷೆ ಪ್ರಾರಂಭವಾಗುವ ಮುನ್ನ ಹಾಜರುಪಡಿಸಬೇಕು.

(14) **ಪ್ರಮಾಣ ಪತ್ರಗಳು** :- ಅಭ್ಯರ್ಥಿಗಳು ಈ ಕೆಳಕಂಡ ಪ್ರಮಾಣ ಪತ್ರಗಳನ್ನು ತಮ್ಮಲ್ಲಿ ಇಟ್ಟುಕೊಂಡಿದ್ದು, ಮೂಲ ದಾಖಲಾತಿಗಳ ಪರಿಶೀಲನೆಯ ಸಂದರ್ಭದಲ್ಲಿ ಸಮಿತಿಯ ಮುಂದೆ ಹಾಜರುಪಡಿಸತಕ್ಕದ್ದು.

14.1) ಜನ್ಮ ದಿನಾಂಕವನ್ನೊಳಗೊಂಡ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ / ವರ್ಗಾವಣೆ ಪತ್ರ.

14.2) ಪದವಿ ಪರೀಕ್ಷೆಯ ಅಂಕಪಟ್ಟಿ/ಪದವಿ ಪ್ರಮಾಣ ಪತ್ರ (ಜೈಲರ್ ಹುದ್ದೆಗೆ)

14.3) ಸರ್ಕಾರಿ ಇಲಾಖೆಯಲ್ಲಿ/ ರಾಜ್ಯ ಸರ್ಕಾರದ/ ಕೇಂದ್ರ ಸರ್ಕಾರದ/ ಸರ್ಕಾರದ ಯಾವುದೇ ಪ್ರಾಧೀಕಾರದಲ್ಲಿ/ ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ, ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಚಾ ಅನುಮತಿ ಪತ್ರ.

14.4) ಕಂಪ್ಯೂಟರ್ ಪರಿಣತಿಯನ್ನು ಹೊಂದಿದವರಾಗಿದ್ದರೆ, ಆ ಬಗ್ಗೆ ಪ್ರಮಾಣ ಪತ್ರ.

**15. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು** :-

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ ನಮೂನೆ-"ಡಿ" ಪ್ರಮಾಣ ಪತ್ರ.

ಬಿ) ಪ್ರವರ್ಗ – 1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ-"ಇ" ಪ್ರಮಾಣ ಪತ್ರ.

ಸಿ) ಪ್ರವರ್ಗ- 2ಎ, 2ಬಿ, 3ಎ, 3ಬಿಗೆ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ – "ಎಫ್" ಪ್ರಮಾಣ ಪತ್ರ.

**ಸೂಚನೆ** : ನಮೂನೆ – "ಎಫ್" ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:09.03.2019 ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

**16. ಗ್ರಾಮೀಣ ಮೀಸಲಾತಿ** :-

ಎ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರಬೇಕು;

ಬಿ) ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು ವ್ಯಾಸಂಗ ಮಾಡಿದ ಅವದಿಯಲ್ಲಿ ಅಂದಿನ ಕರ್ನಾಟಕ ಪೌರ ನಿಗಮಗಳ ಅದಿನಿಯಮ 1976ರ ಅಥವಾ ಕರ್ನಾಟಕ ಪೌರಸಭೆಗಳ

downloaded from: www.kpscvaani.com

ಅದಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಯಾಗಿರಬೇಕು;

ಸಿ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅದಿಸೂಚನೆ ಸಂಖ್ಯೆ. ಸಿಆಸುಇ:08:ಸೆನೆನಿ:2001, ದಿನಾಂಕ.13.02.2001ರ ಪ್ರಕಾರ ಮೇಲೆ ಪರಿಭಾಷಿಸಿದಂತೆ ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರುವವರು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ/96/ಸೆನೆನಿ/2005, ದಿನಾಂಕ: 10.08.2005ರಲ್ಲಿ ನಿಗದಿಪಡಿಸಿದ ನಮೂನೆ-2ರ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾದಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು ಪಡೆಯುವುದು. ನಮೂನೆ-1 (ನಾನ್-ಕ್ರೀಮಿ ಲೇಯರ್) ಮತ್ತು ನಮೂನೆ-2 ಇವುಗಳು ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ಕಡ್ಡಾಯವಾಗಿರುತ್ತದೆ.

ಡಿ) ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-2ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾದಿಕಾರದಿಂದ ಪಡೆದು ಸಲ್ಲಿಸುವುದು.

**ಸೂಚನೆ**: ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು Non-Creamy Layer ಪ್ರಮಾಣ ಪತ್ರವನ್ನು ಹೊಂದಿರದಿದ್ದಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

17. **ಯೋಜನಾ ನಿರಾಶ್ರಿತರು** :-
ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ಅದಿಸೂಚನೆ ಸಂಖ್ಯೆ. ಡಿಪಿಎಆರ್:23:ಎಸ್‌ಆರ್‌ಆರ್:99, ದಿನಾಂಕ 23.11.2000 ರನ್ವಯ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ) ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ:44:ಸೆನೆನಿ:2001, ದಿನಾಂಕ:27.07.2001ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು.

18. **ಕನ್ನಡ ಮಾಧ್ಯಮ** :-
ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾದಿಕಾರಿಗಳಿಂದ ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

19. **ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ:**
ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಯೋಜನೆ ಹೊಂದಿದ ಬಗೆಗಿನ ಪ್ರಮಾಣ ಪತ್ರ/ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

downloaded from: www.kpscvaani.com

**20. ಹೈದ್ರಬಾದ್-ಕರ್ನಾಟಕ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ.**

ಹೈದ್ರಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವೃಂದಕ್ಕೆ ಮೀಸಲರಿಸಿದ ಹುದ್ದೆಗಳಿಗೆ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಗಧಿತ ನಮೂನೆಯ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

**21. ಆಯ್ಕೆ ವಿಧಾನ :-**

**ವಾರ್ಡರ್ ಹುದ್ದೆಗೆ**: ದೇಹದಾರ್ಢ್ಯತೆ ಮತ್ತು ದೈಹಿಕ ಸಾಮಾರ್ಥ್ಯ ಪರೀಕ್ಷೆಗಳಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳನ್ನು ಆಯ್ಕೆ ಪ್ರಾಧಿಕಾರಿಯು ಗುರುತಿಸಿ, ಅಭ್ಯರ್ಥಿಗಳು ಅರ್ಹತಾ (qualifying) ಪರೀಕ್ಷೆಯಲ್ಲಿ ಪಡೆದ ಶೇಕಡಾವಾರು ಅಂಕಗಳನ್ನೂ, ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಕೂಡಿ ಅರ್ಹತಾ ಪಟ್ಟಿಯನ್ನು ತಯಾರಿಸಿ ಅದನ್ನು ಆದರಿಸಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರತಿ ಗುಂಪು / ಪ್ರವರ್ಗಗಳನುಸಾರ ಅಂತಿಮ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

**ಜೈಲರ್ ಹುದ್ದೆಗೆ**: ಮೌಖಿಕ ಪರೀಕ್ಷೆಯ ನಂತರ ಆಯ್ಕೆ ಪ್ರಾಧಿಕಾರಿಯು ಅಭ್ಯರ್ಥಿಗಳು ಅರ್ಹತಾ (qualifying) ಪರೀಕ್ಷೆಯಲ್ಲಿ ಪಡೆದ ಶೇಕಡಾವಾರು ಅಂಕಗಳನ್ನೂ, ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಮತ್ತು ಮೌಖಿಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಕೂಡಿ ಅದರ ಆಧಾರದ ಮೇಲೆ ಅರ್ಹತ ಪಟ್ಟಿಯನ್ನು ತಯಾರಿಸಿ, ಸದರಿ ಅರ್ಹತಾ ಪಟ್ಟಿಯಿಂದ ಪ್ರತಿ ಗುಂಪು / ಪ್ರವರ್ಗಗಳನುಸಾರ ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಿ, ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

**22. ನೇಮಕಾತಿಗೆ ಅನರ್ಹತೆಗಳು:**

(22.1) ಈ ಕೆಳಗೆ ಕಾಣಿಸಿದವರಲ್ಲದ ಯಾವ ವ್ಯಕ್ತಿಯೂ ಈ ಅದಿಸೂಚನೆಯಲ್ಲಿ ವಿವರಿಸಿದ ಹುದ್ದೆಗಳಿಗೆ ಅರ್ಹನಾಗಿರುವುದಿಲ್ಲ.

(ಎ) ಭಾರತದ ಪೌರ ಅಥವಾ

(ಬಿ) ನೇಪಾಳದ ಪ್ರಜೆ ಅಥವಾ

(ಸಿ) ಭೂತಾನದ ಪ್ರಜೆ ಅಥವಾ

(ಡಿ) ಭಾರತದಲ್ಲಿ ಖಾಯಂ ಆಗಿ ನೆಲೆಸುವ ಉದ್ದೇಶದಿಂದ 1962 ಜನವರಿ 1ನೇ ದಿನಾಂಕಕ್ಕೆ ಮೊದಲು ಭಾರತಕ್ಕೆ ಬಂದಿರುವ ಟಿಬೆಟಿಯನ್ ನಿರಾಶ್ರಿತರ ಅಥವಾ

(ಇ) ಪಾಕಿಸ್ತಾನ, ಮ್ಯಾನ್ಮಾರ (ಬರ್ಮಾ), ಶ್ರೀಲಂಕಾ ಅಥವಾ ಆಫ್ರಿಕಾದ ರಾಷ್ಟ್ರಗಳಾದ ಕೀನ್ಯಾ, ಉಗಾಂಡಾ, ತಾಂಜಾನಿಯಾ ಸಂಯುಕ್ತ ಗಣರಾಜ್ಯ (ಹಿಂದಿನ ಟಾಂಗೋನಿಕಾ ಅಂಝೀಬಾರ), ಝಾಂಬಿಯಾ ಮಾಲ್ವಿ, ಝ್ಯೆರ್, ಇಥಿಯೋಪಿಯಾ ಅಥವಾ ವಿಯಟ್ನಾಂಗಳಿಗೆ ವಲಸೆ ಹೋದ ಭಾರತೀಯ ಮೂಲದ ವ್ಯಕ್ತಿ.

(22.2) ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು ಹೊಂದಿದ ಪುರುಷ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

(22.3) ಯಾವುದೇ ಅಭ್ಯರ್ಥಿಯು ಅಧಿಕೃತ ಅಥವಾ ಅನಧಿಕೃತ ಒತ್ತಡ ಅಥವಾ ಪ್ರಭಾವ ತರಲು ಪ್ರಯತ್ನಿಸಿದಲ್ಲಿ ಅವರು ನೇಮಕಾತಿಗೆ ಅರ್ಹರಾಗುವುದಿಲ್ಲ.

(22.4) ಯಾವುದೇ ಅಭ್ಯರ್ಥಿಯು ಅರ್ಜಿ ಹಾಕುವ ಸಮಯದಲ್ಲಿ ಯಾವುದೇ ಸರ್ಕಾರಿ ಇಲಾಖೆಯಲ್ಲಿ ಅಥವಾ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಪ್ರಾಧಿಕಾರದಲ್ಲಿ ಖಾಯಂ ಅಥವಾ ತಾತ್ಕಾಲಿಕ ನೌಕರಿಯಲ್ಲಿದ್ದಲ್ಲಿ ಅಂತಹವರು ಸಂದರ್ಭಾನುಸಾರ ಎಲ್ಲಿ ಸೇವೆ ಸಲ್ಲಿಸುತ್ತಿದ್ದರೋ ಆಯಾ ಇಲಾಖಾ ಮುಖ್ಯಸ್ಥರು ಅಥವಾ ಸರ್ಕಾರದ ಅಥವಾ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಅರ್ಜಿ ಸಲ್ಲಿಸಿದ್ದಲ್ಲಿ ಅವರು ನೇಮಕಾತಿಗೆ ಅರ್ಹರಾಗುವುದಿಲ್ಲ. ಆದರೆ

downloaded from: www.kpscvaani.com

ಇದು ಸರ್ಕಾರದ ಯಾವುದೇ ಇಲಾಖೆಯಲ್ಲಿ ಸ್ಥಳೀಯ ಅಭ್ಯರ್ಥಿಯಾಗಿ ನೇಮಕ ಹೊಂದಿದ್ದಲ್ಲಿ ಅವರನ್ನು ಅಂತೆಯೇ ಪರಿಗಣಿಸುವವರೆಗೆ ಅನ್ವಯಿಸುವುದಿಲ್ಲ.

(22.5) ಕೆಳಕಾಣಿಸಿದ ಯಾವುದೇ ವ್ಯಕ್ತಿ ಹುದ್ದೆಗೆ ನೇಮಕಾತಿಯಾಗಲು ಅರ್ಹರಲ್ಲ.

ಎ) ಕಾನೂನು ಬಾಹಿರ ಸಂಸ್ಥೆಯೆಂದು ಅಥವಾ ಸಂಘವೆಂದು ಘೋಷಿಸಲಾದಂತಹ ಯಾವುದೇ ಸಂಸ್ಥೆಯ ಅಥವಾ ಸಂಘದ ಸದಸ್ಯರಾಗಿದ್ದರೆ ಅಥವಾ **ಸ್ವಂತ ಅಥವಾ ಬೇರೆಯವರ ಸಂಬಂಧ ಹೊಂದಿದ್ದಲ್ಲಿ ಅಥವಾ ಸಂಪರ್ಕ ಹೊಂದಿದ್ದಲ್ಲಿ**

**ಅಥವಾ**

ಬಿ) ಈ ಕೆಳಕಂಡ ಯಾವುದೇ ಚಟುವಟಿಕೆ ಅಥವಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರೆ ಅಥವಾ ಸಂಪರ್ಕವಿಟ್ಟುಕೊಂಡಿದ್ದರೆ ;

i) ಭಾರತ ಸಂವಿಧಾನವನ್ನು ಬುಡಮೇಲು ಮಾಡುವ ಉದ್ದೇಶವನ್ನು ಹೊಂದಿರುವ

ii) ಹಿಂಸಾತ್ಮಕ ಕೃತ್ಯವು ಒಳಗೊಂಡ ಸಂಘಟಿತನ ಕಾನೂನು ಉಲ್ಲಂಘನೆ ಅಥವಾ ಪ್ರತಿಭಟನೆಯ ಉದ್ದೇಶ ಹೊಂದಿರುವ

iii) ಭಾರತದ ಪರಮಾಧಿಕಾರದ ಮತ್ತು ಸಮಗ್ರತೆಯ ಹಿತಾಸಕ್ತಿಗಳಿಗೆ ಅಥವಾ ರಾಜ್ಯ ಭದ್ರತೆಗೆ ಪ್ರತಿಕೂಲವಾದ ಉದ್ದೇಶವನ್ನು ಹೊಂದಿರುವ ಅಥವಾ

iv) ಧರ್ಮ, ಕುಲ, ಭಾಷೆ, ಜಾತಿ ಅಥವಾ ಕೋಮುಗಳ ಆಧಾರದ ಮೇಲೆ ವಿವಿಧ ವರ್ಗಗಳ ಜನರ ನಡುವೆ ದ್ವೇಷ ಅಥವಾ ಹಗೆತನದ ಭಾವನೆಗಳನ್ನು ಪ್ರಚೋದಿಸುವ **ಅಥವಾ**

ಸಿ) ಭಾರತ ಸರ್ಕಾರದ ಅಥವಾ ಯಾವುದೇ ರಾಜ್ಯ ಸರ್ಕಾರದ ಸೇವೆಯಿಂದ ವಜಾ ಆಗಿರುವವರು.

(22.6) ಯಾವುದೇ ವ್ಯಕ್ತಿ ಕ್ರಿಮಿನಲ್ ಮೊಕದ್ದಮೆಯಲ್ಲಿ ಶಿಕ್ಷೆಗೆ ಗುರಿಯಾಗಿರಬಾರದು ಹಾಗೂ ಕೇಂದ್ರ ಅಥವಾ ಯಾವುದೇ ರಾಜ್ಯ ಲೋಕಸೇವಾ ಆಯೋಗದವರು ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗುವುದರಿಂದ ತಾತ್ಕಾಲಿಕವಾಗಿ ಬಹಿಷ್ಕರಿಸಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಿದ್ದರೆ. ಸರ್ಕಾರವು ಈ ಎಲ್ಲಾ ಸಂದರ್ಭಗಳನ್ನು ಪುನರಾವಲೋಕಿಸಿ ಈ ನೇಮಕಾತಿಗೆ ಅರ್ಹನೆಂದು ಪರಿಗಣಿಸುವವರೆಗೆ ಸಾಧಾರಣವಾಗಿ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

(22.7) ಕ್ರಿಮಿನಲ್ ಅಪರಾಧ ಮೊಕದ್ದಮೆಗಳಲ್ಲಿ ಒಳಗೊಂಡ ಅಭ್ಯರ್ಥಿಯನ್ನು ಅನರ್ಹರೆಂದು ಪರಿಗಣಿಸಲಾಗುವುದು.

(22.8) ಸುಳ್ಳು ಮಾಹಿತಿಯನ್ನೊಳಗೊಂಡ ಅರ್ಜಿಗಳು ಅನರ್ಹಗೊಳ್ಳುತ್ತವೆ.

(22.9) ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

**23. ಷರತ್ತುಗಳು:–**

(23.1) ಅಭ್ಯರ್ಥಿಗಳು ಆನ್‌ಲೈನ್ (Online) ಮುಖೇನ ಅರ್ಜಿ ಸಲ್ಲಿಸತಕ್ಕದ್ದು.

(23.2) **ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದವರೆಗೆ ಕಾಯದೆ ಆದಷ್ಟು ಶೀಘ್ರವಾಗಿ ಆನ್‌ಲೈನ್ (Online) ಮೂಲಕ ಅರ್ಜಿ ಸಲ್ಲಿಸತಕ್ಕದ್ದು.**

(23.3) ಅಭ್ಯರ್ಥಿಯು ಅರ್ಜಿ ಹಾಕುವ ಸಮಯದಲ್ಲಿ ಯಾವುದೇ ಕೇಂದ್ರ/ರಾಜ್ಯ ಸರ್ಕಾರದ ಯಾವುದೇ ಪ್ರಾಧಿಕಾರ ಅಥವಾ ಕೇಂದ್ರ ಅಥವಾ ರಾಜ್ಯ ಸಾರ್ವಜನಿಕ ಸ್ವಾಮ್ಯಗಳಲ್ಲಿ ನೌಕರಿಯಲ್ಲಿದ್ದಲ್ಲಿ ಅಂತಹವರು ಇಲಾಖಾ ಮುಖ್ಯಸ್ಥರ ಅಥವಾ ನೇಮಕಾತಿ ಪ್ರಾಧಿಕಾರಿಯಿಂದ ಸೂಕ್ತ ನಿರಾಕ್ಷೇಪಣ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

downloaded from: www.kpscvaani.com

(23.4) ಅಭ್ಯರ್ಥಿಯು ನಿಗದಿಗೊಳಿಸಿದ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದರೆ ಅರ್ಹತೆ ಹೊಂದುವುದಿಲ್ಲ.

(23.5) ಅಭ್ಯರ್ಥಿಯು ಒಂದು ಸಲ ಆಯ್ಕೆ ಮಾಡಿದ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.

(23.6) ಅಂತಿಮವಾಗಿ ಆಯ್ಕೆಯಾದ ಅಭ್ಯರ್ಥಿಯು ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿ ಸೇವೆ ಸಲ್ಲಿಸಲು ಸಿದ್ಧನಾಗಿರಬೇಕು.

(23.7) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(23.8) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಅಭ್ಯರ್ಥಿಯ ಅನರ್ಹತೆಯ ಬಗ್ಗೆ ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳನ್ನು ಅನರ್ಹರೆಂದು ಪರಿಗಣಿಸಲಾಗುವುದು.

(23.9) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು ಡಿಬಾರ್ ಮಾಡಲಾಗುವುದು.

(23.10) ಅಭ್ಯರ್ಥಿಗಳು ಯಾವ ಪ್ರವರ್ಗದಡಿಯಲ್ಲಿ ಮೀಸಲಾತಿಯನ್ನು ಬಯಸುತ್ತಾರೋ ಅದೇ ಪ್ರವರ್ಗದಡಿಯಲ್ಲಿ ಆಯ್ಕೆ ಪ್ರಕ್ರಿಯೆಯನ್ನು ಮಾಡಲಾಗುವುದು. ಯಾವುದೇ ಕಾರಣಕ್ಕೆ ಅದನ್ನು ಬದಲಾಯಿಸುವಂತಿಲ್ಲ.

(23.11) ಅಭ್ಯರ್ಥಿಗಳಿಗೆ ಕೆಲಸದಲ್ಲಿ ಕನ್ನಡವನ್ನು ಉಪಯೋಗಿಸುವ ಪೂರ್ಣ ಪರಿಜ್ಞಾನವಿರಬೇಕು. ಮೇಲ್ಕಾಣಿಸಿದ ಹುದ್ದೆಗಳಿಗೆ ಆಯ್ಕೆ ಹೊಂದಿದ ಅಭ್ಯರ್ಥಿಗಳ ಪೈಕಿ ಎಸ್.ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಗಳಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ತೆಗೆದುಕೊಂಡು ತೇರ್ಗಡೆಯಾಗದೆ ಇರುವ ಅಭ್ಯರ್ಥಿಗಳು 1984 ರ ಕೆ.ಸಿ.ಎಸ್. (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳನ್ವಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಹೊರತು ನೇಮಕ ಹೊಂದಲು ಅರ್ಹರಾಗುವುದಿಲ್ಲ. ಈ ಪರೀಕ್ಷೆಯನ್ನು ನೇಮಕಾತಿ ಪ್ರಾಧಿಕಾರಿ ನಡೆಸುವರು.

**24. <u>ವಿಶೇಷ ಸೂಚನೆಗಳು</u> :-**

ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೆ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ, ಸಹಿ ಮಾಡದ ಹಾಗೂ ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಈ ಕೆಳಕಂಡ ವಿಶೇಷ ಸೂಚನೆಗಳನ್ನು ಗಮನಿಸುವುದು.

24.1) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

24.2) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಕಾಲಂನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು (**No Objection Certificate**) ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿದ್ದು ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

downloaded from: www.kpscvaani.com

24.3) ಅರ್ಹ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲೆ/ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಿ, ಸಾಮಾನ್ಯ ವರ್ಗದಡಿಯಲ್ಲಿ ಅರ್ಹತೆ ಹೊಂದಿದಲ್ಲಿ ಪರಿಗಣಿಸಲಾಗುವುದು.

24.4) ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಂದರೆ 09.03.2019ಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ (ಜೈಲರ್ ಹುದ್ದೆಗೆ ಪದವಿ ಅಥವಾ ತತ್ಸಮಾನ ಮತ್ತು ವಾರ್ಡರ್ ಹುದ್ದೆಗೆ ಎಸ್.ಎಸ್.ಎಲ್.ಸಿ /10ನೇ ತರಗತಿ ಅಥವಾ ತತ್ಸಮಾನ) ಯನ್ನು ಹೊಂದಿರಬೇಕು.

24.5) ಅಭ್ಯರ್ಥಿಗಳು ಅರ್ಜಿಯಲ್ಲಿ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ. ಅರ್ಜಿಯಲ್ಲಿನ ವಿವರಗಳು ಸರಿಯಾಗಿವೆಯೇ ಎಂದು ಮನಗಂಡು ಆ ನಂತರ ಮೂಲ ಅರ್ಜಿಯನ್ನು ಭರ್ತಿಮಾಡುವುದು ಸೂಕ್ತ. ಒಂದು ವೇಳೆ ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳನ್ನು ಸರಿಯಾಗಿ ನಮೂದಿಸದೆ ಇದ್ದಲ್ಲಿ ಅಥವಾ ತಪ್ಪಾಗಿ ನಮೂದಿಸಿದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು.

24.6) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ/ಬಂದ್ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ:09.03.2019 ಮಾತ್ರ ಅನ್ವಯವಾಗುತ್ತದೆ.

24.7) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

24.8) ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಕಾರಾಗೃಹಗಳ ಇಲಾಖೆಯ ಅಧಿಕೃತ ವೆಬ್‌ಸೈಟ್ **www.karnatakaprisons.in** ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

24.9) ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಪರಿಗಣಿಸಿ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ತಯಾರು (Upload) ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕ ಪಾವತಿಸದ, ಅಭ್ಯರ್ಥಿಯ ಸಹಿ ಇಲ್ಲದ ಮತ್ತು ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

24.10) ಪರೀಕ್ಷೆಗೆ ಪ್ರವೇಶವು ಸಂಪೂರ್ಣವಾಗಿ ತಾತ್ಕಾಲಿಕವಾಗಿರುತ್ತದೆ. ಪ್ರವೇಶ ಪತ್ರ ನೀಡಿದ ಮಾತ್ರಕ್ಕೆ ನೇಮಕಾತಿ ಸಮಿತಿಯು ನಿಮ್ಮ ಅಭ್ಯರ್ಥಿತನವನ್ನು ಅಂಗೀಕರಿಸಿದೆ ಎಂದು ಭಾವಿಸತಕ್ಕದ್ದಲ್ಲ.

24.11) ಪ್ರಶ್ನೆ ಪತ್ರಿಕೆಯಲ್ಲಿ ಯಾವುದಾದರೂ ಮುದ್ರಣ ದೋಷವಾಗಿದ್ದಲ್ಲಿ ಅದನ್ನು ತಕ್ಷಣ ಕೊಠಡಿಯ ಪರಿವೀಕ್ಷಕ ಗಮನಕ್ಕೆ ತಂದು ಸರಿಯಾದ ಪ್ರಶ್ನೆ ಪತ್ರಿಕೆ ಪಡೆದುಕೊಂಡು ಉತ್ತರವನ್ನು ಬರೆಯಬೇಕು. ಇದರ ಬಗ್ಗೆ ಪರೀಕ್ಷೆ ಮುಗಿದ ನಂತರ ನೇಮಕಾತಿ ಸಮಿತಿಗೆ ಸದರಿ ವಿಷಯದ ಬಗ್ಗೆ ತಿಳಿಸಿದಲ್ಲಿ ಅದನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

downloaded from: www.kpscvaani.com

24.12)ಉತ್ತರ ಪತ್ರಿಕೆಯನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ಧಪಡಿಸುವುದರಿಂದ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮಾಹಿತಿಯನ್ನು ಭರ್ತಿ ಮಾಡುವ ಸಲುವಾಗಿ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಗೆ ತಪ್ಪದೇ ಹಾಜರಾಗತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಕೆಲವು ಮಾರ್ಗ ಸೂಚನೆಗಳನ್ನು ನೀಡುತ್ತಾರೆ.

24.13)ಪರೀಕ್ಷೆ ಮುಗಿದ ಒಂದು ಅಥವಾ ಎರಡು ದಿನಗಳ ನಂತರ ತಾತ್ಕಾಲಿಕ ಕೀ ಉತ್ತರಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಉತ್ತರಗಳ ಬಗ್ಗೆ ಏನಾದರೂ ಆಕ್ಷೇಪಣೆಗಳು ಇದಲ್ಲಿ ಅದಕ್ಕೆ ಒಂದು ವಾರದ ಕಾಲಾವಕಾಶವನ್ನು ನೀಡಲಾಗುವುದು. ಆಕ್ಷೇಪಣೆಗಳು ಬಂದ ನಂತರ ಅದನ್ನು ಒಂದು ತಜ್ಞರ ಸಮಿತಿಗೆ ನೀಡಿ ಅವರಿಂದ ಸರಿಯಾದ ಉತ್ತರಗಳನ್ನು ಪಡೆದು ಅಂತಿಮ ಕೀ ಉತ್ತರಗಳನ್ನು ಪ್ರಕಟಿಸಲಾಗುವುದು ಮತ್ತು ಈ ಅಂತಿಮ ಕೀ ಉತ್ತರಗಳ ಪ್ರಕಾರ ಉತ್ತರ ಪತ್ರಿಕೆಯನ್ನು ಮೌಲ್ಯಮಾಪನ ಮಾಡಲಾಗುವುದು.

24.14)ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾ ಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

24.15)ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ/ ದಾಖಲಾತಿಗಳನ್ನು ಸಲ್ಲಿಸಿ ನೌಕರಿ ಪಡೆಯುವುದು/ ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ, ಅದೇ ಹಂತದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸುವುದರ ಜೊತೆಗೆ ಅವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

24.16)ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ (Rules & Regulation) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

24.17)ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು 1977ರಲ್ಲಿ ನಿರ್ದಿಷ್ಟಗೊಳಿಸಿರುವಂತೆ ಆಯ್ಕೆಯಾದ ಅಭ್ಯರ್ಥಿಯು ನೇಮಕಾತಿ ಆದೇಶ ನೀಡುವ ಮುನ್ನ ಪೂರ್ಣ ಪ್ರಮಾಣದ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕಾಗುತ್ತದೆ. ನಿಯಮದಲ್ಲಿ ನಿಗದಿಪಡಿಸಿರುವ ವೈದ್ಯಕೀಯ ಪರೀಕ್ಷೆಯಲ್ಲಿ ವಿಫಲರಾದ ಅಭ್ಯರ್ಥಿಗಳನ್ನು ಅನರ್ಹ ಗೊಳಿಸಲಾಗುವುದು.

24.18)**ದುರ್ನಡತೆ :** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

downloaded from: www.kpscvaani.com

24.19) ಅಭ್ಯರ್ಥಿಗಳು ಜೈಲರ್ ಮತ್ತು ವಾರ್ಡರ್ ಹುದ್ದೆ (ಪುರುಷ ಮತ್ತು ಮಹಿಳಾ) – ನೇಮಕಾತಿಗೆ ಸಂಬಂಧಿಸಿದಂತೆ ಸಹಾಯವಾಣಿಗೆ ಸಂಪರ್ಕಿಸಿ ತಮ್ಮ ನೇಮಕಾತಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಸ್ಪಷ್ಟ ಪಡಿಸಿಕೊಳ್ಳಬಹುದು. ಸಹಾಯವಾಣಿಯ ಸಂಖ್ಯೆ ಈ ಕೆಳಕಂಡಂತಿರುತ್ತದೆ. ಈ ಸಹಾಯವಾಣಿ ದಿನಾಂಕ:21.02.2019 ರಿಂದ ಪ್ರತಿದಿನ ಬೆಳಗ್ಗೆ 10–00 ರಿಂದ ಸಾಯಂಕಾಲ 5–30 ಗಂಟೆಯವರೆಗೆ ಲಭ್ಯವಿರುತ್ತದೆ. ಅಲ್ಲದೆ ಮೇಲಿಂದ ಮೇಲೆ ನೇಮಕಾತಿಗೆ ಸಂಬಂಧಪಟ್ಟಂತೆ ಬರುವ ಸಾಮಾನ್ಯ ಪ್ರಶ್ನೆಗಳಿಗೆ (Frequenty Asked Questions - FAQ) ಉತ್ತರವನ್ನು **www.karnatakaprisons.in** ವೆಬ್‌ಸೈಟ್‌ನಲ್ಲಿ ನೋಡಬಹುದು.

- ಸಹಾಯವಾಣಿ ಸಂಖ್ಯೆ (Help line) **080 – 22262263**
- ಇ–ಮೇಲ್ ವಿಳಾಸ **phq.prisons-kar@gov.in**

**ಸಹಿ/–**
**ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು,**
**ನೇಮಕಾತಿ, ಬೆಂಗಳೂರು.**

downloaded from: www.kpscvaani.com

**(ಪ.ಜಾ/ ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಡಿ**

(ನಿಯಮ 3ಎ (2) (3) ನೋಡಿ)

**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**–: ಪ್ರಮಾಣ ಪತ್ರ :–**

........................................................... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ............................ ಜಿಲ್ಲೆಯ/ ವಿಭಾಗದ ......................................... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .............. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ............................................... ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಲಾಗಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950

* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950

* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950

* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅದಿ ನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅದಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅದಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅದಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).

* ಸಂವಿಧಾನ

* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ್, 1956

* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅದಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿದಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.

* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962

* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964

* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ್, 1967

* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988

* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* ........................................................................................ ಮತ್ತು / ಅಥವಾ ಅವನ* / ಅವಳ * ಕುಟುಂಬವು ............................................................................ ರಾಜ್ಯ / ಕೇಂದ್ರಾಡಳಿತ ಪ್ರದೇಶದ ............................................ ಜಿಲ್ಲಾ / ವಿಭಾಗದ ......................... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

**ಸ್ಥಳ:** ಸಹಿ .................................................

**ದಿನಾಂಕ:** ತಹಶೀಲ್ದಾರರು .................................................

ಪದನಾಮ ಕಛೇರಿಯ ಮೊಹರಿನೊಂದಿಗೆ

downloaded from: www.kpscvaani.com

**(ಪ್ರವರ್ಗ – 1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ**

(ನಿಯಮ 3ಎ (2) (3) ನೋಡಿ)

**ಹಿಂದುಳಿದ ವರ್ಗಗಳಿಗೆ (ಪ್ರ.ವರ್ಗ–1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ**

.................................................................................................................... ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ........................................................................................................ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ........................................................................................................ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ................................................................ ಜಾತಿಯ ........................................... ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು

ದಿನಾಂಕ : ............................ ತಾಲ್ಲೂಕು

ಕಛೇರಿಯ ಮೊಹರು

**ರಾಜ್ಯ / ಕೇಂದ್ರಾಡಳಿತ ಪ್ರದೇಶ***

**ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ**

ಸೂಚನೆ : ಇಲ್ಲಿ ಉಪಯೋಗಿಸಿದ "ಸಾಮಾನ್ಯ ನಿವಾಸಿಗಳೂ" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ. ಬಿಸಿ 12028 / 2/ 76–ಎಸ್‌ಸಿಟಿ–1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ 13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

downloaded from: www.kpscvaani.com

**(ಪ್ರವರ್ಗ –2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ –ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು**

**ಜಾತಿ ಪ್ರಮಾಣ ಪತ್ರ**

................................................................ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ................................................ ಇವರ ಮಗ /ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ ....................................... ಇವರು ಮತ್ತು ಆತನ / ಅವಳ ತಂದೆ / ತಾಯಿ /ಪೋಷಕರು/ಪತ್ನಿ/ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ· / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ .43100–83900/– ಪ್ರಾರಂಬಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯ ಆದಾಯವು 8 ಲಕ್ಷ ಮೀರುವುದಿಲ್ಲವೆಂದು ; ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯುಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ.

ಶ್ರೀ/ಶ್ರೀಮತಿ/ಕುಮಾರಿ................................. ಇವರು ...................................... ಜಾತಿಗೆ ........................................ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ.............................. (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ : ತಹಶೀಲ್ದಾರರು

ದಿನಾಂಕ : ........................... ತಾಲ್ಲೂಕು

ಕಛೇರಿಯ ಮೊಹರು

downloaded from: www.kpscvaani.com

**ನಮೂನೆ–1**

**ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ**

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು,
.................... ತಾಲ್ಲೂಕು,
.................... ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ ..................................................... ಎಂಬುವವರ ಮಗ/ಮಗಳು/ಪತಿ/ಪತ್ನಿ............................ ಆದ ನಾನು ಮೇಲುಸ್ತರದಲ್ಲಿ (creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ :
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ ?
10. ಸಂಪತ್ತು ತೆರಿಗೆ ಪಾವತಿದಾರರೇ ?
11. ಮಾರಾಟ ತೆರಿಗೆ ಪಾವತಿದಾರರೇ ?

downloaded from: www.kpscvaani.com

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ
ದಿನಾಂಕ : (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ : ತಂದೆ/ತಾಯಿ/ಪೋಷಕರ ಸಹಿ
ದಿನಾಂಕ : (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು**

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

**ಪರಿಶೀಲನಾ ಪ್ರಮಾಣ ಪತ್ರ**

1. ಶ್ರೀ/ಶ್ರೀಮತಿ.......................................................................... ಎಂಬುವವರ ಮಗ/ಮಗಳು/ಪತಿ/ಪತ್ನಿ/ಶ್ರೀ/ ಶ್ರೀಮತಿ/ಕುಮಾರಿ................................ ಎಂಬುವವರು ಕರ್ನಾಟಕ ರಾಜ್ಯದ ................................ ಜಿಲ್ಲೆಯ ವಿಭಾಗ ............................ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ....................................................... ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು
ದಿನಾಂಕ : ........................ ತಾಲ್ಲೂಕು
ಕಛೇರಿಯ ಮೊಹರು

**ಸೂಚನೆ–1:** ಇದರಲ್ಲಿ ಉಪಯೋಗಿಸಲಾದ "ಸಾಮಾನ್ಯ ನಿವಾಸಿ" ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.
**ಸೂಚನೆ–2:** ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

downloaded from: www.kpscvaani.com

**ನಮೂನೆ – 2**

**ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ......................................................................ರವರ ಮಗ/ಮಗಳು/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ ............................................... ಜಿಲ್ಲೆ ............................. ತಾಲ್ಲೂಕು .............................. ಗ್ರಾಮದಲ್ಲಿ ......................... ವಾಸವಾಗಿರುವ ಇವರು ಒಂದನೇ ತರಗತಿಯಿಂದ ................................ ತರಗತಿಯವರೆಗೆ ......................................ಜಿಲ್ಲೆ.................................ತಾಲ್ಲೂಕು...............................ಪಟ್ಟಣ ............................................. ಶಾಲೆಯಲ್ಲಿ ವ್ಯಾಸಂಗ ಮಾಡಿ ................................ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರ ನಿಗಮಗಳ ಅದಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅದಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸ್ಥಳ : ಮುಖ್ಯೋಪಾಧ್ಯಾಯರ ಸಹಿ
ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲುರುಜು
ಕ್ಷೇತ್ರ ಶಿಕ್ಷಣಾದಿಕಾರಿ

ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಇ 44 ಸೆನೆನಿ 2001 ದಿನಾಂಕ 27-07-2001

**ನಮೂನೆ-3**

**ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ**

ಶ್ರೀ/ಶ್ರೀಮತಿ ........................................................................... ಎಂಬುವವರ ಮಗ/ ಮಗಳು/ ಪತ್ನಿ/ ಶ್ರೀಮತಿ/ ಕುಮಾರಿ ................................................. ಜಿಲ್ಲೆ ............................. ತಾಲ್ಲೂಕು .............................. ಗ್ರಾಮದಲ್ಲಿ ವಾಸವಾಗಿರುವ ಇವರು : ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು .........................................................ಯೋಜನೆಗಾಗಿ .............................. ಇಸವಿಯಿಂದು ಸ್ವಾದೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ :-

(i) ** ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು.

(ii) ** ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ : ಯೋಜನೆಯಿಂದ ತಾವು ವಾಸಿಸುವ ಮನೆ :

(iii) ** ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ :

(iv) ** ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ : ಸಹಿ/- ತಹಶೀಲ್ದಾರರು
ದಿನಾಂಕ : ........................ ತಾಲ್ಲೂಕು, ಕಛೇರಿಯ ಮೊಹರು

(** ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು.)

downloaded from: www.kpscvaani.com

**ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ........................................................................................ ರವರ ಮಗ/ಮಗಳು/ಪತ್ನಿ/ಶ್ರೀಮತಿ/ ಕುಮಾರಿ ............................................... ಜಿಲ್ಲೆ ............................. ತಾಲ್ಲೂಕು ............................... ಗ್ರಾಮದಲ್ಲಿ ...................... ವಾಸವಾಗಿರುವ ಇವರು ................................... ನೇ ತರಗತಿಯಿಂದ .......................................... ನೇ ತರಗತಿಯವರೆಗೆ .............................. ಶೈಕ್ಷಣಿಕ ವರ್ಷದಿಂದ .............................. ಶೈಕ್ಷಣಿಕ ವರ್ಷದವರೆಗೆ.............................. ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ಮುಖ್ಯೋಪಾಧ್ಯಾಯರ ಸಹಿ
ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲು ರುಜು
ಕ್ಷೇತ್ರ ಶಿಕ್ಷಣಾದಿಕಾರಿ, ಕಛೇರಿಯ ಮೊಹರು

**ಹೈದರಾಬಾದ್–ಕರ್ನಾಟಕ ಮೀಸಲಾತಿ ಬಯಸಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ**

**ಅನುಬಂಧ – ಎ**

**ಅರ್ಹತಾ ಪ್ರಮಾಣ ಪತ್ರ**

**[ ಅನುಚ್ಛೇದ 371(ಜೆ) ಮೇರೆಗೆ]**

**(3(3)ನೇ ನಿಯಮ ನೋಡಿ)**

**(ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ)**

ಶ್ರೀ / ಶ್ರೀಮತಿ ........................................................................................ ರವರ ಮಗ/ ಪತ್ನಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ............................................... ಜಿಲ್ಲೆಯ ............................. ತಾಲ್ಲೂಕಿನ ................................ ಗ್ರಾಮ/ ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ : ಹೆಸರು:.................................................
ದಿನಾಂಕ : ಅಸಿಸ್ಟೆಂಟ್ ಕಮಿಷನರ್
................................ ಉಪ ವಿಭಾಗ
.................................. ಜಿಲ್ಲೆ.

downloaded from: www.kpscvaani.com